ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 113
ಸದಸ್ಯರ ಹೆಸರು : ಶ್ರೀ ನಿರಾಣಿ ಹಣಮಂತ್ ರುದ್ರಪ್ಪ
ಉತ್ತರಿಸಬೇಕಾದ ದಿನಾಂಕ : 01-02-2021
ಉತ್ತರಿಸುವ ಸಚಿವರು : ಮಾನ್ಯ ಸಮಾಜ ಕಲ್ಯಾಣ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	"ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ" (KREIS-ಕ್ರೈಸ್)ವು ಇತ್ತೀಚೆಗೆ ಪ್ರಕಟಿಸಿದ ವಸತಿ ಶಾಲೆಗಳ ಸಹ ಶಿಕ್ಷಕರುಗಳ ಅಂತಿಮ ಜೇಷ್ಠತಾ ಪಟ್ಟಿಯನ್ನು "ಕರ್ನಾಟಕ ಸರ್ಕಾರಿ ನೌಕರರ 1957ರ ಜೇಷ್ಠತಾ ನಿಯಮಗಳ"ಅನುಸಾರವಾಗಿ ಎಂದು ನಡವಳಿಯಲ್ಲಿ ನಮೂದಿಸಲಾಗಿದೆಯೇ:	ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಸಮಾಜ ಕಲ್ಯಾಣ ಇಲಾಖೆಯ ಅಂಗ ಸಂಸ್ಥೆಯಾಗಿದ್ದು, ಸಂಘವನ್ನು ಕರ್ನಾಟಕ ಸಹಕಾರ ಸಂಘಗಳ ನೋಂದಣಿ ಕಾಯ್ದೆ 1960 ರಡಿಯಲ್ಲಿ ದಿನಾಂಕ: 22.11.1999 ರಂದು ನೋಂದಣಿಯಾಗಿ ದಿನಾಂಕ: 02.02.2000 ರಿಂದ ಕಾರ್ಯಾರಂಭ ಮಾಡಲಾಗಿದೆ. ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘಕ್ಕೆ ಸರ್ಕಾರದ ಆದೇಶ ಸಂಖ್ಯೆ: ಸ.ಕ.ಇ 70 ಮೋ.ದೆ.ಶ. 2010 ದಿ: 21.01.2011 ರಂದು ವೃಂದ ಮತ್ತು ನೇಮಕಾತಿ ನಿಯಮಗಳು ಜಾರಿಗೆ ಬಂದಿರುತ್ತದೆ. ಸದರಿ ವೃಂದ ಮತ್ತು ನೇಮಕಾತಿ ನಿಯಮಗಳು-2011 ರಲ್ಲಿ ಕರ್ನಾಟಕ ಸರ್ಕಾರ ನಾಗರೀಕ ಸೇವಾ (ಜೇಷ್ಠತೆ) ನಿಯಮಗಳು 1957ರನ್ನು ಅಳವಡಿಸಿಕೊಳ್ಳಲಾಗಿದೆ. ಅದರಂತೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿರುವ ವಸತಿ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕ/ಬೋಧಕೇತರ ಖಾಯಂ ಸಿಬ್ಬಂದಿಗಳ ಅಂತಿಮ ಜೇಷ್ಠತಾ ಪಟ್ಟಿಯನ್ನು ದಿನಾಂಕ:13.11.2020 ರಂದು ಹೊರಡಿಸಲಾಗಿರುತ್ತದೆ. ಸದರಿ ಅಧಿಕೃತ ಜ್ಞಾಪನದಲ್ಲಿ "ಕರ್ನಾಟಕ ಸರ್ಕಾರಿ ನೌಕರರ 1957ರ ಜೇಷ್ಠತಾ ನಿಯಮಗಳ ಅನುಸಾರವಾಗಿ ಎಂದು ನಮೂದಿಸಲಾಗಿರುವುದಿಲ್ಲ.
ಆ)	"ಕ್ರೈಸ್" ಸಂಸ್ಥೆಯು ಕರ್ನಾಟಕ ಸರ್ಕಾರಿ ನೌಕರರ 1957ರ ಜೇಷ್ಠತಾ ನಿಯಮಗಳನುಸಾರ ಶಿಕ್ಷಣ ಇಲಾಖೆಯ ಪ್ರೌಢಶಾಲೆಗಳ ಸಹ ಶಿಕ್ಷಕರುಗಳ ಜೇಷ್ಠತಾ ಪಟ್ಟಿಯ ಮಾದರಿಯಂತೆ ವಸತಿ ಶಾಲೆಗಳ ಸಹ ಶಿಕ್ಷಕರುಗಳ ಜೇಷ್ಠತಾ ತಯಾರಿಸಿ ಪ್ರಕಟಿಸಿದೆಯೇ?	ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಸಮಾಜ ಕಲ್ಯಾಣ ಇಲಾಖೆಯ ಅಂಗ ಸಂಸ್ಥೆಯಾಗಿದ್ದು, ಸಂಘವನ್ನು ಕರ್ನಾಟಕ ಸಹಕಾರ ಸಂಘಗಳ ನೋಂದಣಿ ಕಾಯ್ದೆ 1960 ರಡಿಯಲ್ಲಿ ದಿನಾಂಕ: 22.11.1999 ರಂದು ನೋಂದಣಿಯಾಗಿ ದಿನಾಂಕ: 02.02.2000 ರಿಂದ ಕಾರ್ಯಾರಂಭ ಮಾಡಲಾಗಿದೆ. ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘಕ್ಕೆ ಸರ್ಕಾರದ ಆದೇಶ ಸಂಖ್ಯೆ: ಸಕಇ 70 ಮೋ.ದೇ.ಶ 2010 ದಿನಾಂಕ: 21.01.2011 ರಂದು ವೃಂದ

		ಮತ್ತು ನೇಮಕಾತಿ ನಿಯಮಗಳು ಜಾರಿಗೆ ಬಂದಿದ್ದು, ಸದರಿ ವೃಂದ ಮತ್ತು ನೇಮಕಾತಿ ನಿಯಮಗಳು-2011 ರಲ್ಲಿ ಕರ್ನಾಟಕ ಸರ್ಕಾರ ನಾಗರೀಕ ಸೇವಾ (ಜೇಷ್ಠತೆ) ನಿಯಮಗಳು 1957ರನ್ನು ಅಳವಡಿಸಿಕೊಳ್ಳಲಾಗಿರುತ್ತದೆ. ಅದರಂತೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿರುವ ವಸತಿ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕ/ಬೋಧಕೇತರ ಖಾಯಂ ಸಿಬ್ಬಂದಿಗಳ ಅಂತಿಮ ಜೇಷ್ಠತಾ ಪಟ್ಟಿಯನ್ನು ದಿನಾಂಕ:13.11.2020 ರಂದು ಹೊರಡಿಸಲಾಗಿರುತ್ತದೆ. ಆದ್ದರಿಂದ ಶಿಕ್ಷಣ ಇಲಾಖೆಯ ಪ್ರೌಢಶಾಲೆಗಳ ಸಹ ಶಿಕ್ಷಕರ ಜೇಷ್ಠತಾ ಪಟ್ಟಿಯ ಮಾದರಿ ಅನ್ವಯಿಸುವುದಿಲ್ಲ.

ಸಂಖ್ಯೆ: ಸಕಇ 15 ಮೊದೇಶಾ 2021

(ಬಿ. ಶ್ರೀರಾಮುಲು)
ಸಮಾಜ ಕಲ್ಯಾಣ ಸಚಿವರು.